ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 3 ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 15/3/21

# ಶ್ರೀಪಾದ ನಾಯ್ಕ ಆರೋಗ್ಯ ವಿಚಾರಣೆ



ಪಣಜಿ: ಕರ್ನಾಟಕ ವಿಧಾನಸಭೆ ಸಭಾಪತಿ ವಿಶ್ವೇಶ್ವರ ಹೆಗಡೆ ಕಾಗೇರಿ ಭಾನುವಾರ ಗೋವಾಕ್ಕೆ ಆಗಮಿಸಿ ಕೇಂದ್ರ ಆಯುಷ್ ಮಂತ್ರಿ ಶ್ರೀಪಾದ ನಾಯ್ಕ ಆರೋಗ್ಯ ವಿಚಾರಿಸಿದರು. ಒಂದು ತಿಂಗಳ ಹಿಂದೆ ಉತ್ತರ ಕನ್ನಡದ ಯಲ್ಲಾಪುರದಿಂದ ಗೋಕರ್ಣಕ್ಕೆ ತೆರಳುತ್ತಿದ್ದ ವೇಳೆ ಕೇಂದ್ರ ಆಯುಷ್ ಮಂತ್ರಿ ಶ್ರೀಪಾದ ನಾಯ್ಕ ಪಯಣಿಸುತ್ತಿದ್ದ ಕಾರು ಅಪಘಾತಗೊಂಡು ಗಂಭೀರ ಗಾಯಗೊಂಡಿದ್ದರು. ಸದ್ಯ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿರುವ ಶ್ರೀಪಾದ ನಾಯ್ಕ ಚೇತರಿಸಿಕೊಳ್ಳುತ್ತಿದ್ದಾರೆ. ಭಾನುವಾರ ಬೆಳಗ್ಗೆ ಉತ್ತರ ಗೋವಾದ ರಾಯಬಂದರ್‌ಗೆ ಆಗಮಿಸಿದ ಕರ್ನಾಟಕ ವಿಧಾನಸಭೆ ಸಭಾಪತಿ ಕಾಗೇರಿ ಅವರು ಕೇಂದ್ರ ಆಯುಷ್ ಮಂತ್ರಿ ಶ್ರೀಪಾದ ನಾಯ್ಕ ಆರೋಗ್ಯ ವಿಚಾರಿಸಿದರು. ಶಿರಸಿ ಮಾರಿಕಾಂಬಾ ದೇವಿ ಫೋಟೋವನ್ನು ಶ್ರೀಪಾದ ನಾಯ್ಕ ಅವರಿಗೆ ನೀಡಿ ಶೀಘ್ರ ಗುಣಮುಖರಾಗಲೆಂದು ಹಾರೈಸಿದರು. ದಕ್ಷಿಣ ಗೋವಾದ ಮಾಜಿ ಸಂಸದ ನರೇಂದ್ರ ಸಾವಯಿಕರ್ ಉಪಸ್ಥಿತರಿದ್ದರು.